ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ನಿರ್ಮಾಣ ಮಾಡಿರುವ ಕೃಷಿ ಹೊಂಡಗಳ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

118 (1245) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ನಿರ್ಮಾಣ ಮಾಡಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು;

(ಆ) ಕೃಷಿ ಹೊಂಡಗಳ ನಿರ್ಮಾಣಕ್ಕೆ ಮಂಜೂರಾಗಿರುವ ಅನುದಾನವೆಷ್ಟು; ಈ ಯೋಜನೆಯಿಂದ ಸದುಪಯೋಗ ಪಡಿಸಿಕೊಂಡಿರುವ ಫಲಾನುಭವಿಗಳೆಷ್ಟು;

(ಇ) 2019-20 ಹಾಗೂ 2020-21ನೇ ಸಾಲಿನಲ್ಲಿ ಈ ಯೋಜನೆ ಮುಂದುವರೆಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಕೃಷಿ ಯಾಂತ್ರಿಕ ಉಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆಯೇ;

(ಉ) ರೈತರಿಗೆ ಅನುಕೂಲವಾಗುವಂತೆ ಕೃಷಿ ಯಂತ್ರ ಉಪಕರಣಗಳ ಕೇಂದ್ರಗಳನ್ನು ಹೋಬಳಿ ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ತೆರೆಯಲಾಗಿದೆಯೇ; ಯಾವ ಯಾವ ಕೃಷಿ ಯಂತ್ರಗಳನ್ನು ರೈತರಿಗೆ ನೀಡಲಾಗುತ್ತಿದೆ;

(ಊ) ಇತ್ತೀಚಿನ ಆಧುನಿಕ ಕೃಷಿ ಉಪಕರಣಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಋ) ಶಿವಮೊಗ್ಗ ಜಿಲ್ಲೆ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ರಿಯಾಯಿತಿ ದರದಲ್ಲಿ ಎಷ್ಟು ಫಲಾನುಭವಿಗಳಿಗೆ ಕೃಷಿ ಯಂತ್ರಗಳನ್ನು ನೀಡಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)